ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 06/12/20

# ನಾಳೆಯಿಂದ ಹೈವೋಲ್ಟೇಜ್ ವಿಧಾನಮಂಡಲ ಕಲಾಪ

## ಕೃಷಿ ಮಸೂದೆ ಮರು ಮಂಡನೆ, ಸಭಾಪತಿ ವಿರುದ್ಧ ಅವಿಶ್ವಾಸ ಮಂಡನೆ ಸಾಧ್ಯತೆ। ಕೋವಿಡ್ ವೈಫಲ್ಯ, ನೆರೆ ಸಂತ್ರಸ್ತರಿಗೆ ನೆರವು ಕುರಿತು ಚರ್ಚೆ ಸಾಧ್ಯತೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 6/12/20

ರೈತಸಂಘಟನೆಗಳುತೀವ್ರವಿರೋಧಿಸುತ್ತಿರುವ ಎಪಿಎಂಸಿ ತಿದ್ದುಪಡಿ ವಿಧೇಯಕ ಹಾಗೂ ಕರ್ನಾಟಕ ಭೂ ಸುಧಾರಣೆ ತಿದ್ದುಪಡಿ ವಿಧೇಯಕಗಳ ಮರು ಮಂಡನೆ, ಮೇಲ್ಮನೆ ಸಭಾಪತಿ ಪ್ರತಾಪಚಂದ್ರ ಶೆಟ್ಟಿ ವಿರುದ್ಧ ಅವಿಶ್ವಾಸ ಮಂಡನೆ, ಕೋವಿಡ್‌ನಿಂದ ಸಂಕಷ್ಟಕ್ಕೆ ಸಿಲುಕಿದ ಜನರಿಗೆ ಸಿಗದ ಸಹಾಯ, ಪ್ರವಾಹ ಪೀಡಿತ ಪ್ರದೇಶದ ಸಂತ್ರಸ್ತರಿಗೆ ಪೂರ್ಣ ಪ್ರಮಾಣದಲ್ಲಿ ಸಿಗದ ನೆರವು ಸೇರಿದಂತೆ ಹತ್ತು ಹಲವು ವಿಷಯಗಳು ಸೋಮವಾರದಿಂದ ಆರಂಭವಾಗುವ ವಿಧಾನ ಮಂಡಲದ ಚಳಿಗಾಲದ ಅಧಿವೇಶನದ ಕಲಾಪವನ್ನು ಸಾಕಷ್ಟು ಬಿಸಿ ಮಾಡಲಿವೆ.

ಒಂದು ವೇಳೆ ಗೋಹತ್ಯೆ ನಿಷೇಧ ಕಾಯ್ದೆ, ಮತಾಂತರಕ್ಕಾಗಿ ಅಂತರ್ ಧರ್ಮಿಯ ಮದುವೆತಡೆಗೆವಿಧೇಯಕಮಂಡಿಸಿದರಂತೂ ಉಭಯ ಸದನಗಳಲ್ಲಿ ದೊಡ್ಡ ಕೋಲಾಹಲ ಸೃಷ್ಟಿಯಾಗಲಿದೆ. ಇದಲ್ಲದೇ ಇತ್ತೀಚೆಗೆ ನಡೆದ ವಿಧಾನಸಭೆಯ ಎರಡು ಕ್ಷೇತ್ರಗಳಿಗೆ ನಡೆದ ಉಪಚುನಾವಣೆ, ಶಾಲಾ ಕಾಲೇಜುಗಳು ಆರಂಭವಾಗದೇ ಮಕ್ಕಳ ಶಿಕ್ಷಣದ ಮೇಲಾಗುತ್ತಿರುವ ಪರಿಣಾಮ, ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ಹೆಚ್ಚಿನ ನೆರವು ನೀಡದೇ ಇರುವುದು ಕಲಾಪದಲ್ಲಿ ಸಾಕಷ್ಟು ವಾಕ್ಸಮರಕ್ಕೆ ಕಾರಣವಾಗುವ ಸಾಧ್ಯತೆ ಇದೆ.

ಬೆಳಗಾವಿಯಲ್ಲಿ ನಡೆದ ಆಡಳಿತಾರೂಢ ಬಿಜೆಪಿ ಕಾರ್ಯಕಾರಿಣಿ ಸಭೆಯಲ್ಲೂ ಗೋಹತ್ಯೆ ನಿಷೇಧ ಹಾಗೂ ಲವ್ ಜಿಹಾದ್ ನಿಷೇಧಿಸುವ ಸಲುವಾಗಿ ಕಟ್ಟುನಿಟ್ಟಿನ ಕಾನೂನು ತರಬೇಕು ಎಂಬ ನಿರ್ಣಯ ಕೈಗೊಂಡಿರುವುದರಿಂದ ಸರ್ಕಾರ ಈ ನಿಟ್ಟಿನಲ್ಲಿ ದೃಢ ಹೆಜ್ಜೆ ಇಡುವುದು ನಿಶ್ಚಿತವಾಗಿದೆ. ಲವ್ ಜಿಹಾದ್ ನಿಷೇಧಿಸುವ ವಿಧೇಯಕ ಸಾಧ್ಯವಾಗದಿದ್ದರೂ ಗೋಹತ್ಯೆ ನಿಷೇಧ ವಿಧೇಯಕವನ್ನು ಇದೇ ಅಧಿವೇಶನದಲ್ಲಿ ಮಂಡಿಸಲು ಸರ್ಕಾರ ಸಜ್ಜಾಗಿದೆ.



ಈ ನಡುವೆ ಅಧಿವೇಶನ ಆರಂಭವಾಗುವ ಮೊದಲೇ ಬಿಜೆಪಿಯಲ್ಲಿ ಉದ್ಭವಿಸಿದ್ದ ನಾಯಕತ್ವ ಬದಲಾವಣೆ ಕುರಿತ ಗೊಂದಲಕ್ಕೆ ತೆರೆ ಎಳೆಯುವ ಪ್ರಯತ್ನದಲ್ಲಿ ಪಕ್ಷದ ಮುಖಂಡರು ಯಶಸ್ವಿಯಾಗಿದ್ದಾರೆ. ಇನ್ನು ಮುಂದೆ ನಾಯಕತ್ವ ಬದಲಾವಣೆ, ಸಂಪುಟ ವಿಸ್ತರಣೆ ಸಂಬಂಧಿಸಿದಂತೆ ಯಾವುದೇ ರೀತಿಯ ಹೇಳಿಕೆಗಳನ್ನು ನೀಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಿರುವುದರಿಂದ ಅಧಿವೇಶನದ ಸಂದರ್ಭ ಮುಜುಗರಕ್ಕೊಳಗಾಗುವುದರಿಂದ ತಪ್ಪಿಸಿಕೊಂಡಂತಾಗಿದೆ.

ಇದೇ ವೇಳೆ ಹಿಂದಿನ ಸಮ್ಮಿಶ್ರ ಸರ್ಕಾರ ರಚನೆ ಹಿನ್ನೆಲೆ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಕಾಂಗ್ರೆಸ್ ಪಕ್ಷ ಮತ್ತು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಅವರ ಬಗ್ಗೆ ಆಡಿರುವ ಮಾತುಗಳು ಅಧಿವೇಶನದಲ್ಲಿ ಪ್ರತಿಧ್ವನಿಸುವ ಸಾಧ್ಯತೆ ಹೆಚ್ಚಾಗಿದೆ. ಕಾಂಗ್ರೆಸ್ ವಿರುದ್ಧ ತಿರುಗೇಟು ನೀಡಲು ಬಿಜೆಪಿ ನಾಯಕರು ಕುಮಾರಸ್ವಾಮಿ ಅವರ ಮಾತುಗಳನ್ನು ಬಳಸಿಕೊಳ್ಳುವ ಸಂಭವವಿದೆ.

**'ಒಂದು ದೇಶ, ಒಂದು ಚುನಾವಣೆ' ಚರ್ಚೆ:** ಡಿ.7ರಿಂದ 15ರವರೆಗೆ ನಡೆಯಲಿರುವ ಅಧಿವೇಶನದ ಪೈಕಿ ಕೊನೆಯ ಎರಡು ದಿನಗಳ ಕಾಲ ಉಭಯ ಸದನಗಳಲ್ಲಿ 'ಒಂದು ದೇಶ, ಒಂದು ಚುನಾವಣೆ' ವಿಷಯ ಕುರಿತು ಚರ್ಚೆ ನಡೆಯಲಿದೆ. ಉಳಿದ ದಿನ ಎಲ್ಲ ಪ್ರಶ್ನೋತ್ತರ ಸೇರಿದಂತೆ ಎಲ್ಲ ಕಲಾಪಗಳು ನಡೆಯಲಿವೆ. ಕಳೆದ ಅಧಿವೇಶನದಲ್ಲಿ ವಿಧಾನಸಭೆಯಲ್ಲಿ ಅಂಗೀಕಾರವಾಗಿರುವ ಕೆಲವು ವಿಧೇಯಕ ಸೇರಿದಂತೆ 10ಕ್ಕೂ ಹೆಚ್ಚು ವಿಧೇಯಕಗಳು ಸದನದ ಒಪ್ಪಿಗೆಗಾಗಿ ಮಂಡನೆಯಾಗಲಿವೆ.

**ಶಾಸಕರಿಗೆ ಕೋವಿಡ್ ಪರೀಕ್ಷೆ ಇಲ್ಲ:** ಈ ಬಾರಿಯ ಅಧಿವೇಶನಕ್ಕೆ ಬರುವವರಿಗೆ ಕೊವೀಡ್ ಪರೀಕ್ಷೆ ಕಡ್ಡಾಯ ಮಾಡಿಲ್ಲ. ಆದರೆಉಳಿದಂತೆಕಳೆದಬಾರಿಅಧಿವೇಶನದಲ್ಲಿ ಕೈಗೊಂಡ ಮುನ್ನೆಚ್ಚರಿಕೆ ಕ್ರಮಗಳನ್ನು ಈ ಬಾರಿಯೂ ಕೈಗೊಳ್ಳಲಾಗಿದೆ. ಹಿಂದಿನಂತೆ ಆಸನ ವ್ಯವಸ್ಥೆ, ಕಡ್ಡಾಯವಾಗಿ ಮಾಸ್ಕ್, ಆಪ್ತ ಸಹಾಯಕರು, ಗನ್ ಮ್ಯಾನ್‌ಗಳಿಗೆ ವಿಧಾನಸೌಧದ ಮೊದಲ ಮಹಡಿಯಲ್ಲಿ ಆಸನ ವ್ಯವಸ್ಥೆ, ಮೊದಲ ಮಹಡಿಯ ಪೂರ್ವ ಭಾಗದ ಸೆಂಟ್ರಲ್ ಹಾಲ್‌ನಲ್ಲಿ ಕ್ಯಾಂಟೀನ್ ಸೌಲಭ್ಯ ಕಲ್ಪಿಸಲಾಗುತ್ತದೆ. ಹಿಂದಿನ ಅಧಿವೇಶನದಂತೆ ಉಭಯ ಸದನಗಳಿಗೆ ಸಾರ್ವಜನಿಕರಿಗೆ ಪ್ರವೇಶ ನಿರ್ಬಂಧಿಸಲಾಗಿದೆ. ಮಾಧ್ಯಮದವರಿಗೆ ಗ್ಯಾಲರಿಯಲ್ಲಿ ಆಸನ ವ್ಯವಸ್ಥೆ ಮಾಡಲಾಗಿದೆ.